**Regional Bulletin In Kannada**
**29.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.07.2025 / 2.30 p.m.**

**<><><><>**

ಮುಖ್ಯಾಂಶಗಳು

- ರಾಯಚೂರಿನ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್
- ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರ ಜೊತೆ ಇಂದಿನಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಸರಣಿ ಸಭೆ
- ಮಲ್ಲಿಕಾರ್ಜುನ ಖರ್ಗೆ ರಾಜ್ಯ ರಾಜಕೀಯಕ್ಕೆ ಮರಳಿದರೆ ತಪ್ಪೇನಿಲ್ಲ ; ಗೃಹ ಸಚಿವ ಡಾ. ಜಿ. ಪರಮೇಶ್ವರ್
- ನಾಡಿನೆಲ್ಲೆಡೆ ನಾಗರಪಂಚಮಿ ಸಂಭ್ರಮ ; ಕುಕ್ಕೆ, ಘಾಟಿಸುಬ್ರಮಣ್ಯ ದೇವಾಲಯಗಳಲ್ಲಿ ವಿಶೇಷ ಪೂಜೆ

<><><><>

ನವದೆಹಲಿಯಲ್ಲಿಂದು ರಾಷ್ಟ್ರೀಯ ಹೊಸ ಶಿಕ್ಷಣ ನೀತಿಯ ೫ ವರ್ಷಗಳ ಸಂಭ್ರಮಾಚರಣೆಯ ಹಿನ್ನೆಲೆಯಲ್ಲಿ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಪಿಎಂಶ್ರೀ ಶಾಲೆಗಳನ್ನು ಸಮರ್ಪಣೆ ಮಾಡಿದ್ದಾರೆ. ಇದೇ ವೇಳೆ ರಾಯಚೂರು ಜಿಲ್ಲೆಯ ಪಿಎಂಶ್ರೀ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ರಾಯಚೂರು ಜಿಲ್ಲೆಯ ಉಪನಿರ್ದೇಶಕ ಕೆ.ಡಿ. ಬಡಿಗೇರ್, ಪ್ರಾಂಶುಪಾಲರಾದ ಆರ್. ಇಂದಿರಾ, ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ಎಐಸಿಸಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಬಳಿಕ ಇದೀಗ ಸ್ವಪಕ್ಷೀಯ ಶಾಸಕರ ವಿಶ್ವಾಸಗಳಿಸಲು ಮುಂದಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇಂದಿನಿಂದ ನಾಲ್ಕು ದಿನ ಸಚಿವರು, ಶಾಸಕರ ಜೊತೆ ಸರಣಿ ಸಭೆ ನಡೆಸಲಿದ್ದಾರೆ. ಸಂಜೆ ೫ ಗಂಟೆಗೆ ಮೈಸೂರಿನ ಶಾಸಕರ ಜೊತೆ ಸಭೆ ಆರಂಭಿಸಲಿರುವ ಮುಖ್ಯಮಂತ್ರಿ, ಬಳಿಕ ಚಾಮರಾಜನಗರ, ತುಮಕೂರು, ಕೊಡಗು, ಹಾಸನ, ದಕ್ಷಿಣ ಕನ್ನಡ ಜಿಲ್ಲೆಗಳ ಶಾಸಕರು ಮತ್ತು ಆ

ಜಿಲ್ಲೆಗಳ ಉಸ್ತುವಾರಿ ಸಚಿವರ ಜೊತೆ ಸಭೆ ನಡೆಸಲಿದ್ದಾರೆ. ಶಾಸಕರ ಕುಂದು-ಕೊರತೆಗಳನ್ನು ಆಲಿಸಲಿರುವ ಅವರು, ಅಭಿವೃದ್ಧಿ ಯೋಜನೆ ಅನುಷ್ಠಾನಕ್ಕೆ ಸಲಹೆ-ಸೂಚನೆ ನೀಡಲಿದ್ದಾರೆ. ಈ ನಡುವೆ ಇಂದು ಬೆಳಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕಾವೇರಿ ನಿವಾಸದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದರು.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಅಧಿಕಾರ ಬಳಸಿಕೊಂಡು ಶಾಸಕರ ಸಭೆ ನಡೆಸುತ್ತಿದ್ದು, ಇದರಲ್ಲಿ ತಪ್ಪೇನಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನದ ಅವಶ್ಯಕತೆಯಿದ್ದು, ಶಾಸಕರ ಜೊತೆ ಸಭೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಬೆಂಗಳೂರು ಹಾಗೂ ನಾಗರಿಕರ ಹಿತಕ್ಕಾಗಿ ಪಾಲಿಕೆ ವಿಭಜನೆ ಮಾಡಲು ಮುಂದಾಗಿರುವುದಾಗಿ ಸಮರ್ಥಿಸಿಕೊಂಡಿದ್ದಾರೆ. ಇದೇ ವೇಳೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು, ತಮ್ಮ ಭಾವನೆಗಳನ್ನು ಹಂಚಿಕೊಂಡಿರುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ್ದಾರೆ.

<><><><>

ಎಐಸಿಸಿ ಮುಖಂಡ ಮಲ್ಲಿಕಾರ್ಜುನ ಖರ್ಗೆ ಮತ್ತೆ ರಾಜ್ಯ ರಾಜಕೀಯಕ್ಕೆ ಮರಳಿದರೆ ತಪ್ಪೇನಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಸಗೊಬ್ಬರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕೇಸ್ ದಾಖಲಿಸಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಕ್ಕೆ ಸಹಕಾರ ನೀಡುವ ಮೂಲಕ ಅಗತ್ಯ ರಸಗೊಬ್ಬರ ಪೂರೈಸಬೇಕು ಎಂದು ಹೇಳಿದ್ದಾರೆ. ಇದೇ ವೇಳೆ ಧರ್ಮಸ್ಥಳ ಪ್ರಕರಣದ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಎಸ್ಐಟಿ ತನಿಖೆ ನಡೆಯುತ್ತಿದ್ದು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬೆಂಗಳೂರಿನಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ಪೊಲೀಸ್ ಅಧಿಕಾರಿಗಳ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕ್ಷಮೆಯಾಚಿಸಬೇಕು ಎಂದು ಬಿಜೆಪಿ ಒತ್ತಾಯಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನಾಲ್ವರು ಪೊಲೀಸ್ ಅಧಿಕಾರಿಗಳ ಅಮಾನತು ಆದೇಶ ರದ್ದು ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪೊಲೀಸರನ್ನು ಬಲಿಪಶು ಮಾಡಲಾಗಿದೆ ಎಂದು ದೂರಿದ್ದಾರೆ.

<><><><>

ಇಂದು ಅಂತಾರಾಷ್ಟ್ರೀಯ ಹುಲಿ ದಿನ. ಭಾರತದ ರಾಷ್ಟ್ರೀಯ ಪ್ರಾಣಿಯಾದ ಹುಲಿಗಳ ನೈಸರ್ಗಿಕ ಆವಾಸಸ್ಥಾನಗಳನ್ನು ಸಂರಕ್ಷಿಸಲು ಮತ್ತು ಸಾರ್ವಜನಿಕವಾಗಿ ಜಾಗೃತಿ ಮತ್ತು ಬೆಂಬಲವನ್ನು ಹೆಚ್ಚಿಸಲು ಪ್ರತಿವರ್ಷ ಜುಲೈ ೨೯ ರಂದು ಜಾಗತಿಕವಾಗಿ ಈ ದಿನವನ್ನು ಆಚರಿಸಲಾಗುತ್ತದೆ. ವಿಶ್ವದ ಶೇಕಡ ೭೦ರಷ್ಟು ಹುಲಿಗಳು ಭಾರತದಲ್ಲಿವೆ. ಅದರಲ್ಲೂ ಕರ್ನಾಟಕ ೨ನೇ ಅತಿಹೆಚ್ಚು ಹುಲಿಗಳಿರುವ ರಾಜ್ಯವಾಗಿದೆ. ಈ ಹುಲಿಗಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಕೇಂದ್ರ ಸಚಿವ ವಿ. ಸೋಮಣ್ಣ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಹಲವಾರು ಗಣ್ಯರು ಹುಲಿ ದಿನದ ಶುಭಾಶಯ ಕೋರಿದ್ದಾರೆ.

<><><><>

ರಾಜ್ಯದೆಲ್ಲೆಡೆ ಇಂದು ನಾಗರಪಂಚಮಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿಯಾದ್ಯಂತ ಇಂದು ನಾಗರಪಂಚಮಿ ಹಬ್ಬದ ಸಂಭ್ರಮ ಮನೆ ಮಾಡಿತ್ತು. ನಾಗಬನ, ನಾಗ ಸನ್ನಿಧಿ, ನಾಗ ದೇವಸ್ಥಾನಗಳಲ್ಲಿ ಬೆಳಗ್ಗಿನಿಂದಲೇ ಭಕ್ತರ ದಂಡು ನೆರೆದಿದ್ದು, ನಾಗನಿಗೆ ತನು ಎರೆದು ಪೂಜೆ ಸಲ್ಲಿಸಿದ್ದಾರೆ. ಜಿಲ್ಲೆಯ ಪ್ರಸಿದ್ಧ ನಾಗಕ್ಷೇತ್ರವಾದ ಕುಕ್ಕೆ ಸುಬ್ರಹ್ಮಣ್ಯ, ಮಂಗಳೂರಿನ ಕುಡುಪು ಸೇರಿದಂತೆ ವಿವಿಧ ದೇಗುಲಗಳಿಗೆ ಭಕ್ತರ ದಂಡೇ ಹರಿದು ಬಂದಿತ್ತು.  ಉಡುಪಿ ಜಿಲ್ಲೆಯ ವಿವಿಧ ಶ್ರೀ ಸುಬ್ರಹ್ಮಣ್ಯ ಕ್ಷೇತ್ರಗಳು, ನಾಗ ಸನ್ನಿಧಿ, ಕುಟುಂಬದ ಮೂಲ ನಾಗಬನಗಳಲ್ಲಿ ನಾಗರ ಪಂಚಮಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಇಂದು ನಾಗರ ಪಂಚಮಿ ಅಂಗವಾಗಿ ವಿಶೇಷ ಪೂಜೆ ನಾಗರಾಧನೆಯನ್ನು ಹಮ್ಮಿಕೊಳ್ಳಲಾಗಿದೆ. ಮುಂಜಾನೆಯಿಂದಲೆ ಭಕ್ತರು ಆಗಮಿಸಿ ನಾಗ ದೇವರ ಕಲ್ಲುಗಳಿಗೆ ಹಾಲಿನ ಅಭಿಷೇಕ ಮಾಡಿ ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿದರು. ಶ್ರಾವಣ ಮಾಸದ ಹಬ್ಬಗಳ ಸಾಲಿನ ಮೊದಲ ಹಬ್ಬ ನಾಗರ ಪಂಚಮಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾ ಭಕ್ತಿ ಸಂಭ್ರಮಗಳಿಂದ ಆಚರಿಸಲಾಗುತ್ತಿದೆ. ಜನಪದರಲ್ಲಿ ಅಣ್ಣ ತಂಗಿಯರ ಬಾಂಧವ್ಯದ ಬೆಸುಗೆಯಾಗಿ ಆಚರಿಸಲ್ಪಡುವ ಈ ಹಬ್ಬದಲ್ಲಿ ನಾಗಪೂಜೆ ಪ್ರಮುಖವಾಗಿದೆ. ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಪುಣ್ಯಕ್ಷೇತ್ರದಲ್ಲಿನ ನಾಗರಕಲ್ಲುಗಳಿಗೆ ಭಕ್ತರು ಹಾಲೆರೆದು ಪೂಜೆ ಸಲ್ಲಿಸಿದರು.

<><><><>

ನಿರಂತರ ೧೭೦ ಗಂಟೆಗಳ ಕಾಲ ಭರತನಾಟ್ಯ ಪ್ರದರ್ಶನ ನೀಡಿದ ಮಂಗಳೂರಿನ ರೆಮೋನಾ ಪಿರೇರಾ, ಗೋಲ್ಡನ್ ಬುಕ್ ಆಫ್ ರೆಕಾರ್ಡ್‌ನಲ್ಲಿ ಹೆಸರು ದಾಖಲಿಸುವ ಮೂಲಕ ವಿಶ್ವ ದಾಖಲೆಯ ಸಾಧನೆ ಮಾಡಿದ್ದಾರೆ. ಕಳೆದ ಏಳು ದಿನಗಳಿಂದ ನಿರಂತರ ಭರತನಾಟ್ಯ ಪ್ರದರ್ಶನ ನೀಡಿ ಈ ದಾಖಲೆ ಮಾಡಿರುವ ಅವರಿಗೆ ಇಂದು ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ತಂಡ ಅಧಿಕೃತ

ಘೋಷಣೆಯೊಂದಿಗೆ ಪ್ರಶಸ್ತಿ ನೀಡಿ ಗೌರವಿಸಿದೆ. ಮಂಗಳೂರಿನ ಖಾಸಗಿ ಕಾಲೇಜಿನ ವಿದ್ಯಾರ್ಥಿನಿಯಾಗಿರುವ ರೆಮೋನಾ ಪಿರೇರಾ ಇದೇ ೨೧ರಂದು ಬೆಳಿಗ್ಗೆಯಿಂದ ಭರತನಾಟ್ಯ ಪ್ರದರ್ಶನ ಆರಂಭಿಸಿದ್ದರು.

<><><><>

ಕೇಂದ್ರ ಸರ್ಕಾರದ ಯೋಜನೆಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವ ನಿಟ್ಟಿನಲ್ಲಿ, ಪ್ರಧಾನಮಂತ್ರಿ ಮುದ್ರಾ ಯೋಜನೆ ವಿಜಯಪುರ ಜಿಲ್ಲೆಯಲ್ಲಿ ಯಶಸ್ವಿಯಾಗಿದೆ. ಕೇಂದ್ರ ಸರ್ಕಾರವು ೨೦೧೫ ರಲ್ಲಿ ಪ್ರಾರಂಭಿಸಿದ ಈ ಯೋಜನೆಯಲ್ಲಿ ಸಣ್ಣ ಹಾಗೂ ಸೂಕ್ಷ್ಮ ಉದ್ಯಮಗಳಿಗೆ ಹಣಕಾಸಿನ ಸಹಾಯ ನೀಡುವುದು, ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಮತ್ತು ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸುವುದು ಮುದ್ರಾ ಯೋಜನೆಯ ಉದ್ದೇಶವಾಗಿದೆ. ನಿಡಗುಂದಿ ತಾಲೂಕಿನ ಆಲಮಟ್ಟಿಯ ದೇವರಾಜ ಹಿರೇಮನಿ ಮುದ್ರಾ ಯೋಜನೆ ಕುರಿತಂತೆ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

**ಧ್ವನಿ : ದೇವರಾಜ್ ಹಿರೇಮನಿ**

<><><><>

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನಲ್ಲಿಂದು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಸಬಲೀಕರಣ ಹಾಗೂ ಇತರೆ ಹಿಂದುಳಿದ ವರ್ಗಗಳ ಕೋಶಗಳ ಕಚೇರಿಗಳನ್ನು ಪ್ರಭಾರ ಕುಲಪತಿ ಪ್ರೊಫೆಸರ್ ಕೆ.ಆರ್.ಜಲಜಾ ವಿಧ್ಯುಕ್ತವಾಗಿ ಉದ್ಘಾಟಿಸಿದರು. ಕುಲಸಚಿವ ಪ್ರೊ.ಬಿ.ರಮೇಶ್ ಪರೀಕ್ಷಾಪೂರ್ವ ತರಬೇತಿ ಕೇಂದ್ರಕ್ಕೆ ಚಾಲನೆ ನೀಡಿದರು. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ವಿಶ್ವವಿದ್ಯಾಲಯ ಧನಸಹಾಯ ಆಯೋಗದಿಂದ ದೊರೆಯುವ ವಿವಿಧ ಸೌಲಭ್ಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅಗತ್ಯ ಮಾರ್ಗದರ್ಶನ ಮತ್ತು ನೆರವು ಒದಗಿಸಲು ಈ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>